# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ರಾಜ್ಯದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಪ್ರಯಾಣ ಭತ್ಯೆಯನ್ನು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ :**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಸರ್ಕಾರದ ಪತ್ರ ಸಂಖ್ಯೆ: ಸಿಆಸುಇ 78 ಇಕಾಅ 2012, ದಿನಾಂಕ: 26.03.2012
4. ಸರ್ಕಾರದ ಪತ್ರ ಸಂಖ್ಯೆ: ಸಿಆಸುಇ (ಆಸು) ಹೆಮಿನಿ/22/2012/ಸಕಾಲ, ದಿನಾಂಕ: 13/07/2012.
5. ಸರ್ಕಾರದ ಟಿಪ್ಪಣಿ ಸಂಖ್ಯೆ: ಸಿಆಸುಇ 21 ನಾಸೇಖಾ 2012, ದಿನಾಂಕ: 30/01/2013.
6. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 110 ವೆಚ್ಚ 12/2013, ದಿನಾಂಕ: 26/03/2013.

**ಪ್ರಸ್ತಾವನೆ :**

ಮೇಲೆ ಓದಲಾದ (1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ಪತ್ರದಲ್ಲಿ ಕರ್ನಾಟಕ ನಾಗರೀಕ ಸೇವೆಗಳ ಖಾತರಿ ವಿಧೇಯಕ 2011ರ ಸಂಬಂಧ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಸಹಕರಿಸಲು ನೇಮಕಾತಿ ಹೊಂದಿರುವ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಕಛೇರಿ ಕೆಲಸದ ಮೇಲೆ ಯಾವುದೇ ಸ್ಥಳಕ್ಕೆ ಭೇಟಿ ಮಾಡಬೇಕಾದಲ್ಲಿ ರಾಜ್ಯ ಸರ್ಕಾರದ ಗ್ರೂಪ್ 'ಸಿ' ಸಿಬ್ಬಂದಿಗೆ ಅನ್ವಯಿಸುವ ದಿನಭತ್ಯೆ ಮತ್ತು ಪ್ರವಾಸಭತ್ಯೆ ಪಡೆಯಲು ಅರ್ಹರಿರುವುದಾಗಿ ತಿಳಿಸಲಾಗಿದೆ.

ಮೇಲೆ ಓದಲಾದ (4) ರ ಸರ್ಕಾರದ ಪತ್ರದಲ್ಲಿ ಜಿಲ್ಲಾ ಮಟ್ಟದ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಕೇಂದ್ರ ಸ್ಥಾನದಿಂದ ತಾಲ್ಲೂಕು ಮಟ್ಟದ ಕಛೇರಿಗೆ ಭೇಟಿ ನೀಡಿದಾಗ ಕೆ.ಎಸ್.ಆರ್.ಟಿ.ಸಿಯ ಸಾಮಾನ್ಯ ದರದಲ್ಲಿ ಪ್ರಯಾಣ ದರವನ್ನು ನೀಡುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಯವರಿಗೆ ಸೂಚಿಸಲಾಗಿದೆ.

ಮೇಲೆ ಓದಲಾದ (5)ರ ಸರ್ಕಾರದ ಟಿಪ್ಪಣಿಯಲ್ಲಿ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಪ್ರವಾಸ ಮಾಡಿದ್ದಕ್ಕಾಗಿ ಪ್ರವಾಸ/ದಿನಭತ್ಯೆಯನ್ನು ಪಾವತಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡುವ ಬಗ್ಗೆ ಆರ್ಥಿಕ ಇಲಾಖೆಯ ಅನುಮೋದನೆ/ಅಭಿಪ್ರಾಯ ನೀಡುವಂತೆ ಕೋರಲಾಗಿದೆ.

ಮೇಲೆ ಓದಲಾದ (6) ರ ಟಿಪ್ಪಣಿಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011"ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ 30 ಜಿಲ್ಲಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಸಮಾಲೋಚಕರುಗಳಿಗೆ ಪ್ರವಾಸ/ದಿನಭತ್ಯೆಯನ್ನು ಪಾವತಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡುವ ಬಗ್ಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ/ಅಭಿಪ್ರಾಯ ಪಡೆಯಲಾಗಿದೆ. ಅದರಂತೆ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಪ್ರವಾಸ/ದಿನಭತ್ಯೆಯನ್ನು ದಿನಾಂಕ: 01.04.2013ರಿಂದ 31.03.2014ರ ವರೆಗೆ ಒಂದು ವರ್ಷದ ಅವಧಿಗೆ ಪ್ರತಿ ಜಿಲ್ಲಾಧಿಕಾರಿಗೆ ರೂ.10,000/-ಗಳಂತೆ 30 ಜಿಲ್ಲೆಗಳಿಗೂ ಮಂಜೂರಾತಿ ನೀಡಲು ಸರ್ಕಾರದಲ್ಲಿ ತೀರ್ಮಾನಿಸಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 21 ನಾಸೇಖಾ 2013,**
**ಬೆಂಗಳೂರು, ದಿನಾಂಕ: 04ನೇ ಏಪ್ರಿಲ್ 2013.**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011" ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ರಾಜ್ಯದ 30 ಜಿಲ್ಲೆಗಳ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಕೇಂದ್ರಸ್ಥಾನದಿಂದ ತಾಲ್ಲೂಕು ಮಟ್ಟದ ಕಛೇರಿಗೆ ಭೇಟಿ ನೀಡಿದಾ ಕೆ.ಎಸ್.ಆರ್.ಟಿ.ಸಿಯ ಸಾಮಾನ್ಯ ದರದಲ್ಲಿ ಪ್ರಯಾಣ ಭತ್ಯೆಯನ್ನು ನೀಡುವ ಸಲುವಾಗಿ ಪ್ರ ಜಿಲ್ಲಾಧಿಕಾರಿಗೆ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ: 01.04.2013ರಿಂದ 31.03.2014ರ ವರೆ ರೂ.10,000/-ಗಳನ್ನು ಮಂಜೂರು ಮಾಡಿದೆ. ಒಟ್ಟಾರೆ, 30 ಜಿಲ್ಲೆಗಳಿಗೂ ಸೇರಿ ರೂ.3,00,000/ (ಮೂರು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ ಮಂಜೂರಾತಿ ನೀಡಲಾಗಿದೆ.

ಸಹಾಯವಾಣಿ ಕೇಂದ್ರಗಳ ನಿರ್ವಹಣೆಗೆ ತಗಲುವ ವೆಚ್ಚವನ್ನು 2013-14ನೇ ಸಾಲಿ ಲೆಕ್ಕಶೀರ್ಷಿಕೆ "2052-00-090-0-26-05" (ಯೋಜನೇತರ) "ಕರ್ನಾಟಕ ಸಕಾಲ ಸೇವೆಗ ಅಧಿನಿಯಮ, 2011" ರ ಅನುಷ್ಠಾನದಡಿ ಭರಿಸುವುದು.

....3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1049 ವೆಚ್ಚ-12/2013, ದಿನಾಂಕ: 21/03/2013 ರ ಸಹಮತಿಯ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ: 27.04.2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/11/13
(ಸಿ.ಎ. ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

8/11/13

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಟಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು /ಎಲ್ಲಾ ಜಿಲ್ಲೆಯ ಖಜಾನಾಧಿಕಾರಿಗಳು
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ (ಆಸು) ವಿಶ್ವೇಶ್ವರಯ್ಯ ದೊಡ್ಡ ಗೋಪುರ, 20ನೇ ಮಹಡಿ, ಬೆಂಗಳೂರು.
10. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ (ಆಸು), ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.